ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/04/ತಾಂಕೋ/2022-23.

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ : 15.06.2022

## :: ಸುತ್ತೋಲೆ ::

ವಿಷಯ: 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-324ರಲ್ಲಿನ ಘೋಷಣೆಯಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದೊಂದಿಗೆ ನರೇಗಾ ಯೋಜನೆಯಡಿ **' ಕ್ರೀಡಾ ಅಂಕಣ '** ಗಳನ್ನು ಅನುಷ್ಠಾನಗೊಳಿಸುವ ಕುರಿತು.

ಉಲ್ಲೇಖ: 1. ಮಾನ್ಯ ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪತ್ರ ಸಂಖ್ಯೆ: ಡಿವೈಇಎಸ್/ತಾಂ.ಶಾ/ಕ್ರೀಯೋ/218/2021-22, ದಿನಾಂಕ: 17.05.2022

2. ಸರ್ಕಾರದ ಆದೇಶ ಸಂಖ್ಯೆ: ವೈಎಸ್‌ಡಿ-ಇಪಿಇ/125/2022, ದಿನಾಂಕ: 11.04.2022

* * * * *

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಈ ಇಲಾಖಾ ವ್ಯಾಪ್ತಿಯಲ್ಲಿನ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು/ವಸತಿಯುಕ್ತ ಕಾಲೇಜು/ಸಂಸ್ಕೃತ ಕಾಲೇಜು ಮತ್ತು ಚಿತ್ರಕಲಾ ಕಾಲೇಜಿನಲ್ಲಿ ಲಭ್ಯವಿರುವ ಕ್ರೀಡಾಂಗಣ/ಆಟದ ಮೈದಾನದಲ್ಲಿ ಕ್ರೀಡಾ ಅಂಕಣಗಳನ್ನು ನಿರ್ಮಿಸುವ ಸಂಬಂಧ ಉಲ್ಲೇಖಿತ ಪತ್ರಗಳನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸುತ್ತಾ, ಸದರಿ ಪತ್ರಗಳಲ್ಲಿ ತಿಳಿಸಿರುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದೊಂದಿಗೆ ನರೇಗಾ ಯೋಜನೆಯಡಿ **'ಕ್ರೀಡಾ ಅಂಕಣ'** ಗಳನ್ನು ಅನುಷ್ಠಾನಗೊಳಿಸುವ ಸಂಬಂಧ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ವ್ಯವಹರಿಸಿ ಅಗತ್ಯ ಕ್ರಮ ವಹಿಸಲು ಸೂಚಿಸಲಾಗಿದೆ.

*ಕಾಲೇಜು ಶಿಕ್ಷಣ ನಿರ್ದೇಶಕರು*

**ಇವರುಗಳಿಗೆ :**

1) ಈ ಇಲಾಖಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ **ಸರ್ಕಾರಿ ಪ್ರಥಮ ದರ್ಜೆ /ವಸತಿಯುಕ್ತ /ಸಂಸ್ಕೃತ ಮತ್ತು ಚಿತ್ರಕಲಾ ಕಾಲೇಜಿನ** ಪ್ರಾಂಶುಪಾಲರು/ದೈಹಿಕ ಶಿಕ್ಷಣ ನಿರ್ದೇಶಕರುಗಳಿಗೆ - ಅಗತ್ಯ ಕ್ರಮ ವಹಿಸಲು
2) **ಮಾಹಿತಿ ಅಧಿಕಾರಿಗಳು.** ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಕೇಂದ್ರ ಕಛೇರಿ - ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು.

**ಪ್ರತಿಯನ್ನು ಮಾಹಿತಿಗಾಗಿ :**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ(ಕಾಲೇಜು ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು-01
2. ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು.
3. ಕಛೇರಿ ಪ್ರತಿ

# ಕರ್ನಾಟಕ ಸರ್ಕಾರ

ಸಂ:ಡಿವೈಇಎಸ್/ತಾಂ.ಶಾ/ಕ್ರೀಯೋ/218/2021-22

ಆಯುಕ್ತರವರ ಕಛೇರಿ
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ,
ಬೆಂಗಳೂರು, ದಿನಾಂಕ:17-05-2022.

**"ತುರ್ತು"**

ಗೆ,
ಆಯುಕ್ತರು,
ಕಾಲೇಜು ಶಿಕ್ಷಣ ಇಲಾಖೆ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ,
ಬೆಂಗಳೂರು-560001.

ಮಾನ್ಯರೇ,

ವಿಷಯ : 2022-23 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-324ರಲ್ಲಿನ ಘೋಷಣೆಯಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದೊಂದಿಗೆ ನರೇಗಾ ಯೋಜನೆಯಡಿ 'ಕ್ರೀಡಾ ಅಂಕಣ' ಗಳನ್ನು ಒಟ್ಟು ರೂ.504.00 ಕೋಟಿಗಳ ಮೊತ್ತದಲ್ಲಿ" ಅನುಷ್ಠಾನಗೊಳಿಸುವ ಕುರಿತು.

ಉಲ್ಲೇಖ : ಸರ್ಕಾರದ ಆದೇಶ ಸಂ.ವೈ.ಎಸ್.ಡಿ.-ಇಪಿಇ/125/2022 ದಿನಾಂಕ:11-04-2022.

@@@

ಸರ್ಕಾರದ ಸ್ವಾತಂತ್ರ್ಯದ ಅಮೃತ ಮಹೋತ್ಸವ ವರ್ಷಾಚರಣೆಯ ಸಂದರ್ಭದಲ್ಲಿ ದಿನಾಂಕ: 04-03-2022 ರಂದು 2022-23 ನೇ ಸಾಲಿನ ಆಯವ್ಯಯದಲ್ಲಿ "ಗ್ರಾಮೀಣ ಹಾಗೂ ದೇಸಿ ಕ್ರೀಡೆಗಳನ್ನು ಉತ್ತೇಜಿಸಲು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದೊಂದಿಗೆ ನರೇಗಾ ಯೋಜನೆಯಡಿ 'ಕ್ರೀಡಾ ಅಂಕಣ' ಗಳನ್ನು ಒಟ್ಟು ರೂ.504.00 ಕೋಟಿಗಳ ಮೊತ್ತದಲ್ಲಿ" ನಿರ್ಮಿಸಲಾಗುವುದೆಂದು ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ಇವರು ಘೋಷಣೆ ಕಂಡಿಕೆ-324 ರಲ್ಲಿ ಮಾಡಿರುತ್ತಾರೆ. ಸದರಿ ಯೋಜನೆಗೆ ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ದೊರೆತಿದೆ.

"ಈ ಯೋಜನೆಗೆ ಪೂರಕವಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಒಂದು ಸರ್ಕಾರಿ ಶಾಲೆ/ಕಾಲೇಜು/ವಸತಿ ನಿಲಯದಲ್ಲಿ ಲಭ್ಯವಿರುವ ಕ್ರೀಡಾಂಗಣವನ್ನು ನರೇಗಾದಲ್ಲಿ ಅಭಿವೃದ್ಧಿಪಡಿಸಿ, ಅಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ತಲಾ ರೂ.,25,000/- ಮೊತ್ತದ ಕ್ರೀಡಾ ಉಪಕರಣಗಳನ್ನು ಜಿಲ್ಲಾ ವಲಯದ ಲೆಕ್ಕ ಶೀರ್ಷಿಕೆಯಡಿಯಲ್ಲಿ ಒದಗಿಸತಕ್ಕದ್ದು" ಎಂಬುದಾಗಿ ಉಲ್ಲೇಖಿತ ಪತ್ರದಂತೆ ಸರ್ಕಾರದ ಆದೇಶವಾಗಿರುತ್ತದೆ. (ಸರ್ಕಾರದ ಆದೇಶದ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ)

ಆದ್ದರಿಂದ ರಾಜ್ಯದಲ್ಲಿ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಶಾಲೆ/ಕಾಲೇಜು/ವಸತಿ ನಿಲಯದಲ್ಲಿ ಲಭ್ಯವಿರುವ ಸರ್ಕಾರಿ ನಿವೇಶನದಲ್ಲಿ ವಿವಿಧ ಕ್ರೀಡಾ ಅಂಕಣಗಳನ್ನು ನಿರ್ಮಿಸಲು ಆದ್ಯತೆ ನೀಡಲಾಗುತ್ತಿದೆ. ಈ ಸಂಬಂಧ ರಾಜ್ಯಾದ್ಯಂತ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ನಿವೇಶನಗಳಲ್ಲಿ ಕ್ರೀಡಾ ಅಂಕಣಗಳನ್ನು ನಿರ್ಮಿಸುವ ಸಂಬಂಧ ಆಯಾ ಜಿಲ್ಲೆಗಳಲ್ಲಿರುವ ಅಧಿಕಾರಿಗಳಿಗೆ, ದೈಹಿಕ ಶಿಕ್ಷಕರುಗಳಿಗೆ ಸೂಕ್ತ ನಿರ್ದೇಶನ ನೀಡಿ, ಸದರಿ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸಹಕಾರ ನೀಡುವ ಕುರಿತು ತುರ್ತಾಗಿ ಸುತ್ತೋಲೆಯನ್ನು ಹೊರಡಿಸುವಂತೆ ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

ಆಯುಕ್ತರು,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-324ರಲ್ಲಿನ ಘೋಷಣೆಯಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಸಹಭಾಗಿತ್ವದೊಂದಿಗೆ ನರೇಗಾ ಯೋಜನೆಯಡಿ 'ಕ್ರೀಡಾ ಅಂಕಣ'ಗಳನ್ನು 504 ಕೋಟಿ ರೂ.ಗಳ ಮೊತ್ತದಲ್ಲಿ ನಿರ್ಮಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿ ಸಂಖ್ಯೆ:ಪಿಎಸ್‌ಸಿಎಮ್/ಟಿ/1538/2022; ದಿನಾಂಕ:16.03.2022.
2. ಆಯುಕ್ತರು, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪತ್ರ ಸಂಖ್ಯೆ:ಡಿವೈಇಎಸ್/ತಾಂಶಾ/ಕ್ರೀಯೋ/218/2021-22; ದಿನಾಂಕ:30.03.2022.

**ಪ್ರಸ್ತಾವನೆ:**

2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಕಂಡಿಕೆ 324ರಲ್ಲಿ ಈ ಕೆಳಕಂಡಂತೆ ಘೋಷಿಸಿರುತ್ತಾರೆ:-

> "ಗ್ರಾಮೀಣ ಹಾಗೂ ದೇಸಿ ಕ್ರೀಡೆಗಳನ್ನು ಉತ್ತೇಜಿಸಲು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದೊಂದಿಗೆ ನರೇಗಾ ಯೋಜನೆಯಡಿ 'ಕ್ರೀಡಾ ಅಂಕಣ'ಗಳನ್ನು ಒಟ್ಟು 504 ಕೋಟಿ ರೂ.ಗಳ ಮೊತ್ತದಲ್ಲಿ ನಿರ್ಮಿಸಲಾಗುವುದು."

ತತ್ಸಂಬಂಧ ಮೇಲೆ(1)ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಮಾನ್ಯ ಮುಖ್ಯಮಂತ್ರಿಯವರು ಈ ಬಗ್ಗೆ ದಿನಾಂಕ:01.04.2022ರಿಂದ ಜಾರಿಗೆ ಬರುವಂತೆ ಸರ್ಕಾರದ ಆದೇಶವನ್ನು ಹೊರಡಿಸಲು ಸೂಚಿಸಿರುತ್ತಾರೆ.

ಪ್ರಸ್ತುತ, ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರು ಈ ಬಗ್ಗೆ ವಿವರವಾದ ಪ್ರಸ್ತಾವನೆಯನ್ನು ಸಲ್ಲಿಸಿ ಯೋಜನೆಯ ಅನುಷ್ಠಾನಕ್ಕಾಗಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಆಯುಕ್ತಾಲಯದ ಪ್ರಸ್ತಾವನೆಯ ಆಧಾರದಲ್ಲಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ವೈಎಸ್‌ಡಿ-ಇಪಿಇ/125/2022; ಬೆಂಗಳೂರು, ದಿನಾಂಕ: 11.04.2022.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-324ರಲ್ಲಿನ ಘೋಷಣೆಯಂತೆ "ಗ್ರಾಮೀಣ ಹಾಗೂ ದೇಸಿ ಕ್ರೀಡೆಗಳನ್ನು ಉತ್ತೇಜಿಸಲು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದೊಂದಿಗೆ ನರೇಗಾ ಯೋಜನೆಯಡಿ 'ಕ್ರೀಡಾ ಅಂಕಣ'ಗಳನ್ನು ಒಟ್ಟು 504 ಕೋಟಿ ರೂ.ಗಳ ಮೊತ್ತದಲ್ಲಿ ನಿರ್ಮಿಸಲು" ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

11-4-2022

.....2

ಈ ಯೋಜನೆಗೆ ಪೂರಕವಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇರುವ ಒಂದು ಸರ್ಕಾರಿ ಶಾಲೆ/ಕಾಲೇಜು/ವಸತಿ ನಿಲಯದಲ್ಲಿ ಲಭ್ಯವಿರುವ ಕ್ರೀಡಾಂಗಣವನ್ನು ನರೇಗಾದಲ್ಲಿ ಅಭಿವೃದ್ಧಿಪಡಿಸಿ, ಅಲ್ಲಿ ಕ್ರೀಡಾ ಇಲಾಖೆಯ ವತಿಯಿಂದ ತಲಾ ರೂ. 25000/ ಮೊತ್ತದ ಕ್ರೀಡಾ ಉಪಕರಣಗಳನ್ನು ಜಿಲ್ಲಾ ವಲಯದ ಲೆಕ್ಕ ಶೀರ್ಷಿಕೆಯಡಿಯಲ್ಲಿ ಒದಗಿಸತಕ್ಕದ್ದು.

ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಸಹಮತಿಯ ಹಾಗೂ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 41 ವೆಚ್ಚ-1/2022; ದಿನಾಂಕ: 05.04.2022ರಲ್ಲಿ ನೀಡಿರುವ ಅಭಿಪ್ರಾಯದ ಅನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎಂ.ಉಮೇಶ್ ಶಾಸ್ತ್ರಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) / (ಜಿ&ಎಸ್.ಎಸ್.ಎ.) / (ಇ& ಆರ್.ಎಸ್.ಎ.), ಕರ್ನಾಟಕ, ಪಿ.ಬಿ. ನಂ.5398, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ.
3. ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆ.ಆ. ಕೋಶ), ಬಹುಮಹಡಿ ಕಟ್ಟಡ, ಬೆಂಗಳೂರು.
4. ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
5. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು **ಆಯುಕ್ತರ ಮೂಲಕ**
6. ಎಲ್ಲಾ ಜಿಲ್ಲೆಗಳ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ/ಸಹಾಯಕ ನಿರ್ದೇಶಕರುಗಳು **ಆಯುಕ್ತರ ಮೂಲಕ**
7. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
9. ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಹುಮಹಡಿ ಕಟ್ಟಡ.
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.